ಉ) ಸುರಂಗ ಕಾಲುವೆಯ ಬಳಿ ಯಾವಾಗ ಏತ ನೀರಾವರಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ?

ಶ್ರೀ ಎಸ್.ಎಂ. ಕೃಷ್ಣ (ಉಪಮುಖ್ಯಮಂತ್ರಿಗಳು) :

ಅ) ಬಂದಿದೆ.

ಆ) ಬಂದಿದೆ.

ಇ) ಸರ್ಕಾರದ ಪರಿಶೀಲನೆಯಲ್ಲಿದೆ

ಈ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಪರಿಶೀಲಿಸಿದ ನಂತರ ಅಗತ್ಯ ಕ್ರಮ ತೆಗೆದು ಕೊಳ್ಳಲಾಗುವುದು.

ಕರ್ನಾಟಕ ರಾಜ್ಯದ ಮುಜರಾಯಿ ಇಲಾಖೆಯ ಕಾನೂನು ಕುರಿತು

293 - ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ) : ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯಲ್ಲಿ ಹೈದ್ರಾಬಾದ್ ಕರ್ನಾಟಕ ಮುಂಬೈ ಕರ್ನಾಟಕ ಹಾಗೂ ಹಳೇ ಮೈಸೂರು ಬೇರೆ ಬೇರೆ ಕಾನೂನುಗಳಿರುವುದರಿಂದ ದೇವಸ್ಥಾನಗಳಲ್ಲಿ ಅಭಿವೃದ್ಧಿಯಾಗದೆ ಅವ್ಯವಸ್ಥೆಯಾಗಿರುವುದು ನಿಜವೇ ?

ಆ) ಹೈದ್ರಾಬಾದ್ ಕರ್ನಾಟಕ ಧಾರ್ಮಿಕ ದತ್ತಿ ಇಲಾಖೆಯ ಕಾನೂನುಗಳಿಂದ ಹೆಚ್ಚು ಆದಾಯವಿರುವ ದೇವಸ್ಥಾನಗಳಲ್ಲಿ ಅರ್ಚಕರೇ ಇದರ ಲಾಭ ಪಡೆದು ಮಂದಿರಗಳು ದುಸ್ಥಿತಿಯಾಗಿ ಬಿದ್ದು ಹೋಗುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಆದಕ್ಕಾಗಿ ಧಾರ್ಮಿಕ ದತ್ತಿ ಇಲಾಖೆಯಲ್ಲಿ ಏಕರೂಪ ಕಾನೂನು ಮಾಡಿ ಈ ದುಸ್ಥಿತಿಯಲ್ಲಿರುವ ದೇವಸ್ಥಾನಗಳನ್ನು ಸರ್ಕಾರವೇ ವಹಿಸಿಕೊಂಡು ಅಭಿವೃದ್ಧಿ ಮಾಡಲು ಕ್ರಮ ಕೈಗೊಳ್ಳುವುದೇ ?

ಶ್ರೀ ಹಾರ್ನಳ್ಳಿ ರಾಮಸ್ವಾಮಿ (ಕಾನೂನು ಮತ್ತು ಮುಜರಾಯಿ ಸಚಿವರು) :

ಕಾವೇರಿ ಜಲ ವಿವಾದ ಕುರಿತು

98- ಶ್ರೀ ಡಿ.ಬಿ.ಚಂದ್ರೇಗೌಡ (ತೀರ್ಥಹಳ್ಳಿ) : ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಾವೇರಿ ಜಲ ವಿವಾದದ ವಿಚಾರಣೆ (ಟ್ರಿಬ್ಯುನಲ್) ಯಾವ ಹಂತದಲ್ಲಿದೆ ?

ಆ) ಈ ವಿವಾದ ಮುಗಿಯಲು ಇನ್ನು ಎಷ್ಟು ಸಮಯ ಬೇಕಾಗುತ್ತದೆ ?

ಶ್ರೀ ಎಸ್.ಎಂ. ಕೃಷ್ಣ (ಉಪಮುಖ್ಯಮಂತ್ರಿಗಳು) :

ಅ) ತಮಿಳುನಾಡಿನ ಸಾಕ್ಷಿಯ ಪಾಟೀಸವಾಲು ನಡೆಯುತ್ತಿದೆ.

ಆ) ಖಚಿತವಾಗಿ ಹೇಳಲಸಾಧ್ಯ.

ನೆಲಮಂಗಲ ತಾಲ್ಲೂಕು ಮಣ್ಣೆ-ಮರಾಠಿ ಪಾಳ್ಯ ನಿಡವಂದದಿಂದ ಎಲೆಕ್ಯಾತನಹಳ್ಳಿ ರಸ್ತೆ ದುರಸ್ತಿ

169-ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ನೆಲಮಂಗಲ ತಾಲ್ಲೂಕು ಮಣ್ಣೆ ಮರಾಠಿ ಪಾಳ್ಯ ನಿಡವಂದ ಎಲೇಕ್ಯಾತನಹಳ್ಳಿ ರಸ್ತೆ ದುರಸ್ತಿಯಿಲ್ಲದ ಪ್ರಯುಕ್ತ ಈ ರಸ್ತೆಯಲ್ಲಿ ಓಡಾಡುತ್ತಿದ್ದ 15-20